**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ. ಸಂಖ್ಯೆಃ** 139/2024

ಫ್ರಾಸಾ – 1

ಚಾಸಾ – 1

**ಸಾಕ್ಷಿಯು ದಿಃ 28.03.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಮಧು |
| ತಂದೆಯ ಹೆಸರು | : | ಲೇ. ಬಸಪ್ಪ |
| ವಯಸ್ಸು | : | 50 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸಸ್ಥಳ | : | ಪರಮಾಪುರ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :–**

ಚಾಸಾ 2 ರಿಂದ 5 ಗೊತ್ತು. ಆರೋಪಿ ಗೊತ್ತು. ಸಾಕ್ಷಿಯು ದೂರಿನಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದರಿಂದ, ದೂರನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರ್ತಿಸಲಾಯಿತು. ಸಾಕ್ಷಿಯು ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದರಿಂದ, ಪಂಚನಾಮೆಯನ್ನು ನಿಪಿ 2 ಎಂದು, ಸಾಕ್ಷಿಯ ಸಹಿಯನ್ನು ನಿಪಿ 2(ಎ) ಎಂದು ಗುರ್ತಿಸಲಾಯಿತು. ಸದರಿ ಸಹಿಗಳನ್ನು ಯಾವಾಗ ಎಲ್ಲಿ ಮಾಡಿದ್ದೇನೆ ನನಗೆ ಗೊತ್ತಿಲ್ಲ. ಆರೋಪಿಗಳ ವಿರುದ್ಧ ನಾನು ಯಾವುದೇ ದೂರು ನೀಡಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಆರೋಪಿಗಳು ನನಗೆ ಅಕ್ರಮ ಪ್ರತಿಬಂಧ ಉಂಟು ಮಾಡಿ, ಅವಾಚ್ಯ ಶಬ್ಧಗಳಿಂದ ಬೈದು, ಜೀವ ಬೆದರಿಕೆ ಹಾಕಿರುವುದಿಲ್ಲ ಹಾಗೂ ಚಪ್ಪಲಿಯಿಂದ ಹೊಡೆದಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**<u>ಪಾಟೀ ಸವಾಲು :– ಮಾನ್ಯ ಎಪಿಪಿಯವರಿಂದ :–</u>**

ದಿನಾಂಕ 17.01.2024 ರಂದು ಸಂಜೆ 07.00 ಗಂಟೆ ಸಮಯದಲ್ಲಿ ನನ್ನ ಮಗಳಿಗೆ ಆರೋಗ್ಯ ಸಮಸ್ಯೆ ಇದ್ದ ಕಾರಣ ನಮ್ಮ ಗ್ರಾಮದ ಶಿವಾರ್ಚಕ ಶಿವನಾಗಪ್ಪ ರವರ ಮನೆಗೆ ದೇವರ ಯಂತ್ರವನ್ನು ತೆಗೆಯಲು ಹೋಗುತ್ತಿದ್ದಾಗ ಆರೋಪಿಯು ಹಳೆಯ ದ್ವೇಷದಿಂದ ನನ್ನನ್ನು ಅಡ್ಡಗಟ್ಟಿ ತಡೆದು ಬೋಳಿ ಮಗನೆ ಸೂಳೆ ಮಗನೆ ಎಂದು ಅವಾಚ್ಯ ಶಬ್ಧಗಳಿಂದ ಬೈದು ತನ್ನ ಕಾಲಿನಲ್ಲಿದ್ದ ಚಪ್ಪಲಿಯಿಂದ ನನ್ನನ್ನು ಹೊಡೆದು ಅವಮಾನ ಮಾಡಿ, ಕೊಲೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿರುತ್ತಾರೆ ಎಂದು ಈ ಬಗ್ಗೆ  ನಿಪಿ 1 ರಂತೆ ಪೊಲೀಸ್ ಠಾಣೆಗೆ ದೂರು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಈ ದೂರಿನ ವಿಚಾರವಾಗಿ ಪೊಲೀಸರು ದಿಃ 19.01.2024 ರಂದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ 4 ಮತ್ತು 5 ರ ಸಮಕ್ಷಮ  ನಿಪಿ 2 ರಂತೆ ಬೆಳಿಗ್ಗೆ 10.30 ರಿಂದ 11.15 ರ ವೇಳೆಯಲ್ಲಿ ಪಂಚನಾಮೆ ಮಾಡಿ ಒಂದು ಚಪ್ಪಲಿಯನ್ನು ಅಮಾನತ್ತು ಪಡಿಸಿಕೊಂಡರು ಎಂದರೆ ಸರಿಯಲ್ಲ.  ನಿಪಿ 1 ಮತ್ತು 2 ರಲ್ಲಿರುವ ವಿಚಾರಗಳು ಗೊತ್ತಿದದರು ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :– ಆರೋಪಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ